Akashvani : Bangalore
National Bulletin In Kannada
15.02.2025 : 7.35AM
ಆಕಾಶವಾಣಿ, ಬೆಂಗಳೂರು

ರಾಷ್ಟ್ರೀಯ ವಾರ್ತೆಗಳು

******

ಮುಖ್ಯಾಂಶಗಳು :

1. ಪ್ರಧಾನಿ ನರೇಂದ್ರ ಮೋದಿ ಅವರ ಅಮೆರಿಕ-ಫ್ರಾನ್ಸ್ ಪ್ರವಾಸ ಸಂಪನ್ನ
2. ಮ್ಯೂನಿಚ್ ಭದ್ರತಾ ಸಮಾವೇಶದಲ್ಲಿ ಭಾರತೀಯ ಚುನಾವಣಾ ವ್ಯವಸ್ಥೆಯನ್ನು ವಿವರಿಸಿದ ವಿದೇಶಾಂಗ ಸಚಿವ ಡಾ. ಎಸ್. ಜೈಶಂಕರ್
3. ಕೇಂದ್ರ ಸಚಿವ ಅಶ್ವಿನಿ ವೈಷ್ಣವ್ ಇಂದು ಬೆಂಗಳೂರಿಗೆ ಭೇಟಿ; ಇಂಟಲೆಕ್ಚುಯಲ್ ಮೀಟ್ ಸಮಾವೇಶ
4. ಕೇಂದ್ರೀಯ ಪ್ರೌಢ ಶಿಕ್ಷಣ ಮಂಡಳಿ - ಸಿಬಿಎಸ್ಇಯ ೧೦ ಮತ್ತು ೧೨ನೇ ತರಗತಿಗಳ ಬೋರ್ಡ್ ಪರೀಕ್ಷೆಗಳು ಇಂದಿನಿಂದ ಆರಂಭ
5. ಮಹಿಳಾ ಪ್ರೀಮಿಯರ್ ಲೀಗ್ ಕ್ರಿಕೆಟ್; ಉದ್ಘಾಟನಾ ಪಂದ್ಯದಲ್ಲಿ ಗುಜರಾತ್ ಜಾಯಂಟ್ಸ್ ವಿರುದ್ಧ ರಾಯಲ್ ಚಾಲೆಂಜರ್ಸ್ ಬೆಂಗಳೂರಿಗೆ ೬ ವಿಕೆಟ್ ಜಯ

******

ತಮ್ಮ ಫ್ರಾನ್ಸ್ ಹಾಗೂ ಅಮೆರಿಕ ಪ್ರವಾಸವನ್ನು ಸಂಪನ್ನಗೊಳಿಸಿರುವ ಪ್ರಧಾನಿ ನರೇಂದ್ರ ಮೋದಿ, ನಿನ್ನೆ ರಾತ್ರಿ ನವದೆಹಲಿಗೆ ಮರಳಿದ್ದಾರೆ. ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಅವರ ಆಹ್ವಾನದ ಮೇರೆಗೆ ಪ್ರಧಾನಿ, ಅಮೆರಿಕ ಪ್ರವಾಸ ಕೈಗೊಂಡಿದ್ದರು. ಅಧ್ಯಕ್ಷ ಟ್ರಂಪ್ ಅವರು ಎರಡನೇ ಅಧ್ಯಕ್ಷೀಯ ಅವಧಿಯ ಅಧಿಕಾರ ವಹಿಸಿಕೊಂಡ ಬಳಿಕ ಪ್ರಧಾನಿ ಅಮೆರಿಕಾಗೆ ಕೈಗೊಂಡ ಮೊದಲ ಭೇಟಿ ಇದಾಗಿತ್ತು. ಭೇಟಿಯ ವೇಳೆ ಪ್ರಧಾನಿ, ಅಧ್ಯಕ್ಷ ಟ್ರಂಪ್ ಅವರೊಂದಿಗೆ ಸುಮಾರು ೪ ಗಂಟೆಗಳ ಕಾಲ ದ್ವಿಪಕ್ಷೀಯ ಸಭೆ ನಡೆಸಿದರು. ಸಭೆಯಲ್ಲಿ ಕಾರ್ಯತಂತ್ರ ಮತ್ತು ಭದ್ರತಾ ಸಹಕಾರ, ರಕ್ಷಣೆ, ವ್ಯಾಪಾರ ಮತ್ತು ಆರ್ಥಿಕ ವಿನಿಮಯ, ತಂತ್ರಜ್ಞಾನ, ಇಂಧನ ಭದ್ರತೆ, ಜನರಿಂದ ಜನರ ಸಂಪರ್ಕ

ಸೇರಿದಂತೆ ಪರಸ್ಪರ ಹಿತಾಸಕ್ತಿಯ ಪ್ರಾದೇಶಿಕ ಹಾಗೂ ಜಾಗತಿಕ ವಿಷಯಗಳ ಕುರಿತು ಉಭಯ ನಾಯಕರು ಚರ್ಚಿಸಿದರು. ಪ್ರವಾಸದ ಮೊದಲ ಚರಣದಲ್ಲಿ ಪ್ರಧಾನಿ, ಫ್ರಾನ್ಸ್‌ಗೆ ಭೇಟಿ ನೀಡಿ, ಪ್ಯಾರಿಸ್‌ನಲ್ಲಿ ನಡೆದ ಕೃತಕ ಬುದ್ಧಿಮತ್ತೆ ಕ್ರಿಯಾ ಶೃಂಗಸಭೆಯ ಸಹ ಅಧ್ಯಕ್ಷತೆ ವಹಿಸಿದ್ದರು. ಇದೇ ವೇಳೆ ಅವರು ಮಾರ್ಸಿಲ್ಲೆಯಲ್ಲಿ ನೂತನ ದೂತಾವಾಸ ಕಚೇರಿಯನ್ನು ಉದ್ಘಾಟಿಸಿದರು.

******

ಉಪರಾಷ್ಟ್ರಪತಿ ಜಗದೀಪ್ ಧನ್‌ಕರ್ ಇಂದು ಜಮ್ಮುವಿಗೆ ಒಂದು ದಿನದ ಭೇಟಿ ನೀಡಲಿದ್ದಾರೆ. ಈ ಸಂದರ್ಭದಲ್ಲಿ ಅವರು ಕತ್ರಾದಲ್ಲಿ ಶ್ರೀ ಮಾತಾ ವೈಷ್ಣೋದೇವಿ ವಿಶ್ವವಿದ್ಯಾಲಯದ ೧೦ನೇ ಘಟಿಕೋತ್ಸವದಲ್ಲಿ ಮುಖ್ಯ ಅತಿಥಿಯಾಗಿ ಭಾಗವಹಿಸಲಿದ್ದಾರೆ. ಉಪರಾಷ್ಟ್ರಪತಿಗಳು ರಿಯಾಸಿ ಜಿಲ್ಲೆಯ ತ್ರಿಕೂಟ ಬೆಟ್ಟಗಳ ಮೇಲಿರುವ ಮಾತಾ ವೈಷ್ಣೋ ದೇವಿ ದೇವಾಲಯ ಮತ್ತು ಭೈರೋನ್ ದೇವಾಲಯದಲ್ಲಿ ಪೂಜೆ ಸಲ್ಲಿಸಲಿದ್ದಾರೆ.

******

ಭಾರತದ ಪ್ರಜಾಪ್ರಭುತ್ವ ಸರಿಯಾದ ಹಾದಿಯಲ್ಲಿ ಮುನ್ನಡೆದಿದ್ದು, ಅದರ ಪ್ರತಿಫಲ ನೀಡಿದೆ ಎಂದು ಕೇಂದ್ರ ವಿದೇಶಾಂಗ ವ್ಯವಹಾರಗಳ ಸಚಿವ ಡಾ. ಎಸ್. ಜೈಶಂಕರ್ ಹೇಳಿದ್ದಾರೆ.

ಜರ್ಮನಿಯಲ್ಲಿ ನಡೆದ ಮ್ಯೂನಿಚ್ ಭದ್ರತಾ ಸಮಾವೇಶದಲ್ಲಿ 'ಮತ್ತೊಂದು ಮತ ಚಲಾಯಿಸಲು ಬದುಕಿ' ಪ್ರಜಾಪ್ರಭುತ್ವದ ಸದೃಢತೆಯನ್ನು ಬಲಪಡಿಸುವುದು ಎಂಬ ವಿಷಯದ ಮೇಲಿನ ನಡೆದ ವಿಚಾರ ಸಂಕಿರಣದಲ್ಲಿ ಪಾಲ್ಗೊಂಡು ಅವರು ಮಾತನಾಡಿದರು. ಈ ವೇಳೆ ಅವರು, ಭಾರತದಲ್ಲಿ ನಡೆಯುವ ಚುನಾವಣಾ ಪ್ರಕ್ರಿಯೆ ಹಾಗೂ ಇತ್ತೀಚೆಗೆ ನಡೆದ ದೆಹಲಿ ವಿಧಾನಸಭಾ ಹಾಗೂ ಕಳೆದ ವರ್ಷ ನಡೆದ ಲೋಕಸಭಾ ಚುನಾವಣೆ ಕುರಿತು ಪ್ರಸ್ತಾಪಿಸಿದರು. ಚರ್ಚೆಯಲ್ಲಿ ನಾರ್ವೆಯ ಪ್ರಧಾನಿ ಜಾನಸ್ ಘರ್ ಸ್ಟೋರ್, ಅಮೆರಿಕದ ಸೆನೆಟರ್ ಎಲಿಸಾಸ್ ಸ್ಲಾಟ್‌ಕಿನ್, ವಾರ್ಸಾದ ಮೇಯರ್ ರಾಫಲ್ ಸೇರಿದಂತೆ ಹಲವು ಭಾಗವಹಿಸಿದ್ದರು. ಚರ್ಚೆಯಲ್ಲಿ ಸಚಿವ ಜೈಶಂಕರ್ ಜಗತ್ತಿನಾದ್ಯಂತ ಪ್ರಜಾಪ್ರಭುತ್ವ ತೊಂದರೆಯಲ್ಲಿದೆ ಎಂಬ ವಾದವನ್ನು ಒಪ್ಪುವುದಿಲ್ಲ, ಭಾರತದಲ್ಲಿ ನಡೆಯುವ ಚುನಾವಣೆಯಲ್ಲಿ ಮತದಾರರಲ್ಲಿ ಮೂರನೇ ಎರಡು ಭಾಗ ಮಾತ್ರ

ಮತಚಲಾಯಿಸುತ್ತಾರೆ. ಲೋಕಸಭಾ ಚುನಾವಣೆಗಳಲ್ಲಿ ಸುಮಾರು ೯೦೦ ಮಿಲಿಯನ್ ಮತದಾರರಲ್ಲಿ ೭೦೦ ಮಿಲಿಯನ್ ಮತದಾರರು ಮತ ಚಲಾಯಿಸಿದ್ದಾರೆ ಹಾಗೂ ಇವರ ಮತಗಳನ್ನು ಕೇವಲ ಒಂದೇ ದಿನದಲ್ಲಿ ಎಣಿಸಲಾಗುತ್ತದೆ ಎಂದು ಹೇಳಿದರು.

******

ಮಸ್ಕತ್‌ನಲ್ಲಿ ನಾಳೆ ಆರಂಭವಾಗಲಿರುವ ಹಿಂದೂ ಮಹಾಸಾಗರ ಅಧಿವೇಶನದ ಸಂದರ್ಭದಲ್ಲಿ ಭಾರತದ ವಿದೇಶಾಂಗ ಖಾತೆ ಸಚಿವ ಡಾ.ಎಸ್.ಜೈಶಂಕರ್ ಬಾಂಗ್ಲಾದೇಶದ ವಿದೇಶಾಂಗ ಸಲಹೆಗಾರರೊಂದಿಗೆ ಮಾತುಕತೆ ನಡೆಸುವ ನಿರೀಕ್ಷೆ ಇದೆ.  ಭಾರತ ಮತ್ತು  ಒಮ್ಮಾನ್ ವಿದೇಶಾಂಗ ಸಚಿವಾಲಯಗಳು  ಜಂಟಿಯಾಗಿ ಎರಡು ದಿನಗಳ ಈ ಅಧಿವೇಶನ ಆಯೋಜಿಸಿದ್ದು ಇದರಲ್ಲಿ ಪಾಲ್ಗೊಳ್ಳಲು ಬಾಂಗ್ಲಾ ದೇಶದ ವಿದೇಶಾಂಗ ಸಲಹೆಗಾರ ಮೊಹಮ್ಮದ್ ತೌಸೀಫ್ ಹುಸೇನ್ ಅವರಿಗೆ ಒಮಾನ್ ಆಮಂತ್ರಣ ನೀಡಿದೆ. ಸಮುದ್ರಯಾನ ಸಹಭಾಗಿತ್ವದಲ್ಲಿ ಹೊಸ ದಿಗಂತಗಳು ಎನ್ನುವುದು ಈ ಅಧಿವೇಶನದ ಘೋಷ ವಾಕ್ಯವಾಗಿದೆ.

******

ಕೇಂದ್ರ ರೈಲ್ವೆ, ವಾರ್ತಾ ಮತ್ತು ಪ್ರಸಾರ ಖಾತೆ ಹಾಗೂ ಎಲೆಕ್ಟ್ರಾನಿಕ್ಸ್ ಮತ್ತು ಮಾಹಿತಿ ತಂತ್ರಜ್ಞಾನ ಖಾತೆ ಸಚಿವರಾದ ಅಶ್ವಿನಿ ವೈಷ್ಣವ್ ಇಂದು ಬೆಂಗಳೂರಿನ ಆಗಮಿಸಲಿದ್ದು, ಮಲ್ಲೇಶ್ವರದ ಬಿಜೆಪಿ ರಾಜ್ಯ ಕಾರ್ಯಾಲಯದಲ್ಲಿ ಪತ್ರಿಕಾಗೋಷ್ಠಿ ಉದ್ದೇಶಿಸಿ ಮಾತನಾಡಲಿದ್ದಾರೆ. ಬಳಿಕ ನಗರದ ಖಾಸಗಿ ಹೋಟೆಲ್‌ನಲ್ಲಿ ಸಂಜೆ ನಡೆಯಲಿರುವ ಇಂಟಲೆಕ್ಚುಯಲ್ ಮೀಟ್ ಸಮಾವೇಶದಲ್ಲಿ ಭಾಗವಹಿಸಲಿದ್ದಾರೆ.

******

ಕೇಂದ್ರೀಯ ಪ್ರೌಢ ಶಿಕ್ಷಣ ಮಂಡಳಿ - ಸಿಬಿಎಸ್‌ಇಯ ೧೦ ಮತ್ತು ೧೨ ನೇ ತರಗತಿಗಳ ಬೋರ್ಡ್ ಪರೀಕ್ಷೆಗಳು ಇಂದಿನಿಂದ ಪ್ರಾರಂಭವಾಗಲಿವೆ. ಭಾರತ ಮತ್ತು ವಿದೇಶಗಳಲ್ಲಿನ ೭ ಸಾವಿರದ ೮೪೨ ಕೇಂದ್ರಗಳಲ್ಲಿ ೪೨ ಲಕ್ಷಕ್ಕೂ ಹೆಚ್ಚು ವಿದ್ಯಾರ್ಥಿಗಳು ಇಂದು ಪರೀಕ್ಷೆಗಳಿಗೆ ಹಾಜರಾಗುವ ನಿರೀಕ್ಷೆಯಿದೆ. ಪರೀಕ್ಷೆಗಳನ್ನು ಬೆಳಿಗ್ಗೆ ೧೦:೩೦ ರಿಂದ ಮಧ್ಯಾಹ್ನ ೧:೩೦ ರವರೆಗೆ ಒಂದೇ

ಅವಧಿಯಲ್ಲಿ ನಡೆಸಲಾಗುವುದು. ೧೦ ನೇ ತರಗತಿ ಪರೀಕ್ಷೆಗಳು ಮಾರ್ಚ್ ೧೮ ರಂದು ಮತ್ತು ೧೨ ನೇ ತರಗತಿ ಪರೀಕ್ಷೆಗಳು ಏಪ್ರಿಲ್ ೪ ರಂದು ಕೊನೆಗೊಳ್ಳುತ್ತವೆ. ಮೊಬೈಲ್ ಫೋನ್‌ಗಳು, ಸ್ಮಾರ್ಟ್‌ವಾಚ್‌ಗಳು ಮತ್ತು ಎಲೆಕ್ಟ್ರಾನಿಕ್ ಗ್ಯಾಜೆಟ್‌ಗಳನ್ನು ಪರೀಕ್ಷಾ ಕೊಠಡಿ ಒಳಗೆ ಅನುಮತಿಸಲಾಗುವುದಿಲ್ಲ.

******

ಸಾರ್ವಜನಿಕ ಆಡಳಿತದಲ್ಲಿ ಉತ್ತಮ ಸೇವೆಗಾಗಿ ನೀಡಲಾಗುವ ೨೦೨೪ರ ಪ್ರಧಾನಮಂತ್ರಿಗಳ ಪ್ರಶಸ್ತಿಗಳಿಗೆ ನೋಂದಣಿ ಮತ್ತು ಆನ್‌ಲೈನ್ ನಾಮನಿರ್ದೇಶನಗಳ ಸಲ್ಲಿಕೆಯ ಅವಧಿಯನ್ನು ಈ ತಿಂಗಳ ೨೧ ರವರೆಗೆ ವಿಸ್ತರಿಸಲಾಗಿದೆ. ಅರ್ಜಿದಾರರು ಅಪ್‌ಲೋಡ್ ಮಾಡಬೇಕಾದ ದತ್ತಾಂಶದ ಅವಶ್ಯಕತೆ ಮತ್ತು ವಿವಿಧ ಸಂಸ್ಥೆಗಳಿಂದ ಬಂದ ವಿನಂತಿಗಳನ್ನು ಪರಿಗಣಿಸಿ ನಾಮನಿರ್ದೇಶನ ಮತ್ತು ನೋಂದಣಿ ಅವಧಿಯನ್ನು ವಿಸ್ತರಿಸಲಾಗಿದೆ ಎಂದು ಸಿಬ್ಬಂದಿ, ಸಾರ್ವಜನಿಕ ಕುಂದುಕೊರತೆಗಳು ಮತ್ತು ಪಿಂಚಣಿ ಸಚಿವಾಲಯ ತಿಳಿಸಿದೆ. ಸಾರ್ವಜನಿಕ ಆಡಳಿತದಲ್ಲಿನ ಉತ್ತಮ ಸೇವೆಗಾಗಿ ಪ್ರಧಾನಮಂತ್ರಿಗಳ ಪ್ರಶಸ್ತಿಗಳನ್ನು ಕೇಂದ್ರ ಮತ್ತು ರಾಜ್ಯ ಸರ್ಕಾರಗಳ ವಿವಿಧ ಜಿಲ್ಲೆಗಳು ಮತ್ತು ಸಂಸ್ಥೆಗಳು ಮಾಡಿದ ಸಾಧನೆಗಳನ್ನು ಗುರುತಿಸಿ ಈ ಪ್ರಶಸ್ತಿಗಳನ್ನು ನೀಡಲಾಗುತ್ತದೆ. ೨೦೨೪ರ ಪ್ರಧಾನಮಂತ್ರಿಗಳ ಪ್ರಶಸ್ತಿಗಳ ಅಡಿಯಲ್ಲಿ ನಾಮನಿರ್ದೇಶನಗಳ ನೋಂದಣಿ ಮತ್ತು ಸಲ್ಲಿಕೆ ಜನವರಿ ೨೦ರಂದು ಪ್ರಾರಂಭವಾಯಿತು. ಜಿಲ್ಲೆಗಳ ಸಮಗ್ರ ಅಭಿವೃದ್ಧಿ, ಮಹತ್ವಾಕಾಂಕ್ಷೆಯ ಕಾರ್ಯಕ್ರಮ ಮತ್ತು ಕೇಂದ್ರ ಸಚಿವಾಲಯಗಳು ಹಾಗೂ ಇಲಾಖೆಗಳು, ರಾಜ್ಯಗಳು ಮತ್ತು ಜಿಲ್ಲೆಗಳಿಗೆ ನಾವೀನ್ಯತೆಗಳು ಸೇರಿದಂತೆ ೧೧ ವಿಭಾಗಗಳಲ್ಲಿ ನಾಮನಿರ್ದೇಶನಗಳನ್ನು ಆಹ್ವಾನಿಸಲಾಗಿದೆ.

******

ಕಾಂಗ್ರೆಸ್ ಪಕ್ಷ ನಿನ್ನೆ ೧೧ ರಾಜ್ಯಗಳು ಮತ್ತು ಕೇಂದ್ರಾಡಳಿತ ಪ್ರದೇಶಗಳಿಗೆ ನೂತನ ಪ್ರಧಾನ ಕಾರ್ಯದರ್ಶಿಗಳು ಮತ್ತು ಉಸ್ತುವಾರಿಗಳನ್ನು ನೇಮಿಸಿದೆ. ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ, ಛತ್ತೀಸ್‌ಗಢದ ಮಾಜಿ ಮುಖ್ಯಮಂತ್ರಿ ಭೂಪೇಶ್ ಬಘೇಲ್ ಅವರನ್ನು ಪಂಜಾಬ್‌ನ ಉಸ್ತುವಾರಿ ಪ್ರಧಾನ ಕಾರ್ಯದರ್ಶಿಯಾಗಿ ನೇಮಿಸಿದ್ದಾರೆ. ಮಧ್ಯಪ್ರದೇಶಕ್ಕೆ ವರ್ಗಾವಣೆಗೊಂಡಿರುವ ಹರೀಶ್ ಚೌಧರಿ ಅವರ ಬದಲಿಗೆ ಬಘೇಲ್ ಅವರನ್ನು ನೇಮಿಸಲಾಗಿದೆ. ಕರ್ನಾಟಕದ ರಾಜ್ಯಸಭಾ ಸದಸ್ಯ

ಸೈಯದ್ ನಸೀರ್ ಹುಸೇನ್ ಅವರನ್ನು ಜಮ್ಮು ಮತ್ತು ಕಾಶ್ಮೀರ ಮತ್ತು ಲಡಾಖ್‌ನ ಉಸ್ತುವಾರಿ ಪ್ರಧಾನ ಕಾರ್ಯದರ್ಶಿಯಾಗಿ ನೇಮಿಸಲಾಗಿದೆ. ಎಐಸಿಸಿ ಪ್ರಧಾನ ಕಾರ್ಯದರ್ಶಿ ಕೆ.ಸಿ. ವೇಣುಗೋಪಾಲ್ ಬಿಡುಗಡೆ ಮಾಡಿದ ಮಾಹಿತಿ ಪ್ರಕಾರ, ಭರತ್‌ಸಿನ್ಹ್ ಸೋಲಂಕಿ ಅವರ ಬದಲಿಗೆ ಜಮ್ಮು ಮತ್ತು ಕಾಶ್ಮೀರದ ಎಐಸಿಸಿ ಉಸ್ತುವಾರಿಯಾಗಿ ನಸೀರ್ ಹುಸೇನ್ ಅವರನ್ನು ನೇಮಿಸಲಾಗಿದೆ.     ರಾಜ್ಯಸಭಾ ಸದಸ್ಯೆ ರಜನಿ ಪಾಟೀಲ್ ಅವರನ್ನು ಹಿಮಾಚಲ ಪ್ರದೇಶ ಮತ್ತು ಚಂಡೀಗಢದ ಉಸ್ತುವಾರಿಯಾಗಿ ನೇಮಕ ಮಾಡಲಾಗಿದೆ. ಹಿರಿಯ ನಾಯಕ ರಾಜೀವ್ ಶುಕ್ಲಾ ಅವರ ಬದಲಿಗೆ ಅವರನ್ನು ನೇಮಕ ಮಾಡಲಾಗಿದೆ. ಮಧ್ಯಪ್ರದೇಶದ ಮಾಜಿ ಸಂಸದೆ ಮೀನಾಕ್ಷಿ ನಟರಾಜನ್ ಅವರು ತೆಲಂಗಾಣದ ನೂತನ  ಉಸ್ತುವಾರಿಯಾಗಿದ್ದಾರೆ. ದೀಪಕ್ ಬಾಬಾರಿಯಾ ಬದಲಿಗೆ ಬಿ.ಕೆ. ಹರಿಪ್ರಸಾದ್ ಅವರನ್ನು ಹರಿಯಾಣದ ಉಸ್ತುವಾರಿಯಾಗಿ ನೇಮಿಸಿದ್ದಾರೆ. ಗಿರಿ ಚೋಡಂಕರ್ ಅವರನ್ನು ತಮಿಳುನಾಡು ಮತ್ತು ಪುದುಚೇರಿಗೆ ಉಸ್ತುವಾರಿಯಾಗಿ ನೇಮಿಸಲಾಗಿದೆ. ಈ ನಡುವೆ ದೀಪಕ್ ಬಾಬ್ರಿಯಾ, ಮೋಹನ್ ಪ್ರಕಾಶ್, ಭರತ್‌ಸಿನ್ಹ್ ಸೋಲಂಕಿ, ರಾಜೀವ್ ಶುಕ್ಲಾ, ಅಜಯ್ ಕುಮಾರ್ ಮತ್ತು ದೇವೇಂದರ್ ಯಾದವ್ ಹಾಗೂ ಇತರ ಎಲ್ಲಾ ಪ್ರಧಾನ ಕಾರ್ಯದರ್ಶಿಗಳು ಮತ್ತು ಉಸ್ತುವಾರಿಗಳು ಪ್ರಸ್ತುತ  ಗೊತ್ತುಪಡಿಸಿದ ಹುದ್ದೆಗಳಲ್ಲಿ ಸೇವೆ ಸಲ್ಲಿಸುವುದನ್ನು ಮುಂದುವರಿಸುತ್ತಾರೆ ಎಂದು ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಮಾಹಿತಿ ನೀಡಿದ್ದಾರೆ.

******

ಪ್ರಯಾಗ್‌ರಾಜ್‌ನಲ್ಲಿ ನಡೆಯುತ್ತಿರುವ ಮಹಾಕುಂಭಮೇಳದಲ್ಲಿ ೫೦ ಕೋಟಿಗೂ ಹೆಚ್ಚು ಜನರು ಭಾಗವಹಿಸುವ ಮೂಲಕ ಈ ಪ್ರಮಾಣದ ಭಾಗವಹಿಸುವಿಕೆಯನ್ನು ಕಂಡ ವಿಶ್ವದ ಮೊದಲ ಐತಿಹಾಸಿಕ ಕಾರ್ಯಕ್ರಮವಾಗಿ ಇತಿಹಾಸ ಸೃಷ್ಟಿಸಿದೆ. ತ್ರಿವೇಣಿ ಸಂಗಮದಲ್ಲಿ ಇಲ್ಲಿಯವರೆಗೆ ೫೦ ಕೋಟಿ ೪ ಲಕ್ಷಕ್ಕೂ ಹೆಚ್ಚು ಭಕ್ತರು ಪವಿತ್ರ ಸ್ನಾನ ಮಾಡಿದ್ದಾರೆ, ನಿನ್ನೆ  ಸಂಜೆ ೭ ಗಂಟೆಯವರೆಗೆ ೬೦ ಲಕ್ಷ ಭಕ್ತರು ಪವಿತ್ರ ಸ್ನಾನ ಮಾಡಿದ್ದಾರೆ. ಈ ಬಾರಿಯ ಮಹಾಕುಂಭಮೇಳವು  ಮಾನವ ಇತಿಹಾಸದಲ್ಲಿ ಬೃಹತ್ ಧಾರ್ಮಿಕ, ಸಾಂಸ್ಕೃತಿಕ ಹಾಗೂ  ಸಾಮಾಜಿಕ ಕಾರ್ಯಕ್ರಮವಾಗಿದೆ ಎಂದು ಉತ್ತರ ಪ್ರದೇಶ ಸರ್ಕಾರ ತಿಳಿಸಿದೆ.

******

ವಡೋದರಾದ ಕೋಟಂಬಿ ಕ್ರೀಡಾಂಗಣದಲ್ಲಿ ನಿನ್ನೆ ನಡೆದ ಮಹಿಳಾ ಪ್ರೀಮಿಯರ್ ಲೀಗ್ - ಡಬ್ಲ್ಯೂಪಿಎಲ್ ೨೦೨೫ ಕ್ರಿಕೆಟ್ ಪಂದ್ಯಾವಳಿಯ ಉದ್ಘಾಟನಾ ಪಂದ್ಯದಲ್ಲಿ ಹಾಲಿ ಚಾಂಪಿಯನ್ ರಾಯಲ್ ಚಾಲೆಂಜರ್ಸ್ ಬೆಂಗಳೂರು, ಗುಜರಾತ್ ಜಾಯಂಟ್ಸ್ ತಂಡವನ್ನು ೬ ವಿಕೆಟ್‌ಗಳಿಂದ ಮಣಿಸಿದೆ. ಮೊದಲು ಬ್ಯಾಟಿಂಗ್ ಮಾಡಿದ ಗುಜರಾತ್, ನಿಗದಿತ ೨೦ ಓವರ್‌ಗಳಲ್ಲಿ ೫ ವಿಕೆಟ್ ನಷ್ಟಕ್ಕೆ ೨೦೧ ರನ್ ಗಳಿಸಿದೆ. ಇದಕ್ಕುತ್ತರವಾಗಿ ಭಾರತ, ೧೮.೩ ಓವರ್‌ಗಳಲ್ಲಿ ೪ ವಿಕೆಟ್ ಕಳೆದುಕೊಂಡು ೨೦೨ ರನ್ ಗಳಿಸಿ, ಗೆಲುವಿನ ನಗೆ ಬೀರಿತು. ಆರ್‌ಸಿಬಿ ಪರ ರಿಚಾ ಘೋಷ್ ೬೪, ಎಲಿಸ್ ಪೆರಿ ೫೭ ಹಾಗೂ ಕನ್ನಿಕಾ ಅಹುಜಾ ೩೦ ರನ್‌ಗಳಿಸಿ, ತಂಡದ ಗೆಲುವಿನಲ್ಲಿ ಪ್ರಮುಖ ಪಾತ್ರ ವಹಿಸಿದರು. ಇಂದು ಸಂಜೆ ವಡೋದರಾ ಅಂತಾರಾಷ್ಟ್ರೀಯ ಕ್ರಿಕೆಟ್ ಕ್ರೀಡಾಂಗಣದಲ್ಲಿ ನಡೆಯಲಿರುವ ಪಂದ್ಯದಲ್ಲಿ ಮುಂಬೈ ಇಂಡಿಯನ್ಸ್ ಹಾಗೂ ಡೆಲ್ಲಿ ಕ್ಯಾಪಿಟಲ್ಸ್ ಮುಖಾಮುಖಿಯಾಗಲಿವೆ. ಪಂದ್ಯ ರಾತ್ರಿ ೭.೩೦ಕ್ಕೆ ಆರಂಭವಾಗಲಿದೆ.

******

ವಿವಿಧ ಬ್ಯಾಂಕಿಂಗ್ ನಿಬಂಧನೆಗಳನ್ನು ಉಲ್ಲಂಘಿಸಿದ್ದಕ್ಕಾಗಿ ಹಲವು ಖಾಸಗಿ ಹಣಕಾಸು ಸಂಸ್ಥೆಗಳಿಗೆ ಭಾರತೀಯ ರಿಸರ್ವ್ ಬ್ಯಾಂಕ್ ದಂಡ ವಿಧಿಸಿದೆ. ಶ್ರೀರಾಮ್ ಫೈನಾನ್ಸ್ ಮೇಲೆ ೫ ಲಕ್ಷದ ೮೦ ಸಾವಿರದ ರೂಪಾಯಿ, ಉಜ್ಜೀವನ್ ಸಣ್ಣ ಹಣಕಾಸು ಬ್ಯಾಂಕ್ ಮೇಲೆ ೬ ಲಕ್ಷ ೭೦ ಸಾವಿರ ಹಾಗೂ ನೈನಿತಾಲ್ ಬ್ಯಾಂಕ್ ಲಿಮಿಟೆಡ್ ಮೇಲೆ ೬೧ ಲಕ್ಷದ ೪೦ ಸಾವಿರ ರೂಪಾಯಿ ದಂಡ ವಿಧಿಸಲಾಗಿದೆ. ಆರ್‌ಬಿಐ ಬಿಡುಗಡೆಗೊಳಿಸಿರುವ ಪ್ರಕಟಣೆಗಳ ಯಲ್ಲಿ ಈ ಮಾಹಿತಿ ನೀಡಲಾಗಿದೆ.

******

ತಮಿಳುನಾಡು ಹಾಗೂ ಕಾಶಿ ನಡುವಿನ ಸಾಂಸ್ಕೃತಿಕ ಹಾಗೂ ಬೌದ್ಧಿಕ ಸಂಬಂಧಗಳನ್ನು ಬೆಳೆಸುವ ಉಪಕ್ರಮವಾದ ಕಾಶಿ-ತಮಿಳು ಸಂಗಮಮ್ - ಕೆಟಿಎಸ್ ೩.೦ ಇಂದು ಉತ್ತರಪ್ರದೇಶದ ವಾರಾಣಸಿಯಲ್ಲಿ ಆರಂಭವಾಗಲಿದೆ. ಈ ಕಾರ್ಯಕ್ರಮದ ಮೂರನೇ ಆವೃತ್ತಿಯನ್ನು ಕೇಂದ್ರ ಶಿಕ್ಷಣ ಸಚಿವ ಧರ್ಮೇಂದ್ರ ಪ್ರಧಾನ್, ಉತ್ತರ ಪ್ರದೇಶ ಮುಖ್ಯಮಂತ್ರಿ ಯೋಗಿ ಆದಿತ್ಯನಾಥ್, ಕೇಂದ್ರ ಮಾಹಿತಿ ಮತ್ತು ಪ್ರಸಾರ ಖಾತೆ ರಾಜ್ಯ ಸಚಿವ ಡಾ. ಎಲ್. ಮುರುಗನ್ ಉದ್ಘಾಟಿಸಲಿದ್ದಾರೆ. ೧೦

ದಿನಗಳ ಈ ಕಾರ್ಯಕ್ರಮ ಇದೇ ೨೪ರ ವರೆಗೆ ನಡೆಯಲಿದೆ. ಈ ಕಾರ್ಯಕ್ರಮದಲ್ಲಿ ವಿದ್ವಾಂಸರು, ವಿದ್ಯಾರ್ಥಿಗಳು, ತತ್ವಜ್ಞಾನಿಗಳು, ಕುಶಲಕರ್ಮಿಗಳು, ಕಲಾವಿದರು ಪಾಲ್ಗೊಂಡು ಜ್ಞಾನ, ಸಂಸ್ಕೃತಿ ಮತ್ತು ತಮ್ಮ ಅನುಭವಗಳ ಕುರಿತು ವಿಚಾರ ವಿನಿಮಯ ಮಾಡಿಕೊಳ್ಳಲಿದ್ದಾರೆ.

******